ಕರ್ನಾಟಕ ಸರ್ಕಾರ

# ಪದವಿ ಪೂರ್ವ ಶಿಕ್ಷಣ ಇಲಾಖೆ

ನಿರ್ದೇಶಕರ ಕಚೇರಿ, 18 ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ : ಪಪೂಶಿಇ/ಪರೀಕ್ಷೆ/ಖಾಅನೊ/02/2021-22 ದಿನಾಂಕ : 24-11-2021

## : ಸುತ್ತೋಲೆ :

ವಿಷಯ : 2021-22 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ 2021ನೇ ಸಾಲಿನ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ನೊಂದಾಯಿಸಿಕೊಳ್ಳುವ ಕುರಿತು.

ಉಲ್ಲೇಖ : 1. ನಿರ್ದೇಶಕರ ಕಚೇರಿಯ ಸುತ್ತೋಲೆ ಸಂಖ್ಯೆ : ಪಪೂಶಿಇ/ಪರೀಕ್ಷೆ/ಖಾಅನೊ/01/ 2021-22, ದಿನಾಂಕ : 30-10-2021.

2. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು, ಇವರ ಪತ್ರ ಸಂಖ್ಯೆ : ಬಿ3/ಪೂ.ಅಂ.ಮೇ.ಮು.ಲ್ಯಾ.&ಸ.10/2020-21, ದಿನಾಂಕ : 19-11-2021.

~ ~ ~ ~ ~

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿದ್ದು, ದಿನಾಂಕ : 31-03-2022 ಕ್ಕೆ 17 ವರ್ಷಗಳು ಪೂರೈಸಿರುವವರು ಪಿಯುಸಿ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿಕೊಳ್ಳಲು ಉಲ್ಲೇಖ : 01 ರಂತೆ ಅವಕಾಶ ಕಲ್ಪಿಸಿಕೊಡಲಾಗಿತ್ತು. ಇಂತಹ ಅಭ್ಯರ್ಥಿಗಳು ದಂಡ ಶುಲ್ಕವಿಲ್ಲದೆ ಶುಲ್ಕ ಪಾವತಿಸಿ ನೊಂದಾಯಿಸಿಕೊಳ್ಳಲು ದಿನಾಂಕವನ್ನು 27-11-2021 ರವರೆಗೆ ನಿಗಧಿಪಡಿಸಲಾಗಿತ್ತು.

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು 2021 ನೇ ಸಾಲಿನ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಅಂಕಪಟ್ಟಿಗಳ ಸರಬರಾಜು ಕಾರ್ಯವು ಚಾಲ್ತಿಯಲ್ಲಿರುವ ಕಾರಣ, ಉಲ್ಲೇಖ : 02 ರಂತೆ, ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಪ್ರೌಢಶಾಲಾ ಮುಖ್ಯ ಶಿಕ್ಷಕರು ದೃಢೀಕರಿಸಿ ನೀಡುವ ತಾತ್ಕಾಲಿಕ ಅಂಕಪಟ್ಟಿಯೊಂದಿಗೆ ದಂಡ ಶುಲ್ಕವಿಲ್ಲದೆ ಶುಲ್ಕ ಪಾವತಿಸಿ ನೊಂದಾಯಿಸಿಕೊಳ್ಳಲು ದಿನಾಂಕ : 27-11-2021 ರ ನಂತರ ಕನಿಷ್ಠ 10 ದಿನಗಳ ಕಾಲ ವಿಸ್ತರಿಸಲು ಕೋರಿರುವ ಕಾರಣ, ಪ್ರೌಢಶಾಲಾ ಮುಖ್ಯ ಶಿಕ್ಷಕರು ದೃಢೀಕರಿಸಿ ನೀಡುವ ತಾತ್ಕಾಲಿಕ ಅಂಕಪಟ್ಟಿಯೊಂದಿಗೆ ಖಾಸಗಿ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಳ್ಳಲು ಪ್ರಕಟಿಸಿರುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳು ತಮ್ಮ ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಈ ಸುತ್ತೋಲೆಯನ್ನು ವಿತರಿಸಿ, ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned with CamScanner

**2021ನೇ ಸಾಲಿನ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಮಾತ್ರ**

: ಶುಲ್ಕ ಪಾವತಿಸಲು ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :

| ವಿವರಗಳು | ದಂಡ ಶುಲ್ಕವಿಲ್ಲದೆ | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತುಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ. 50-00 ರಂತೆ ಗರಿಷ್ಠ ರೂ. 500-00. |
|---|---|---|
| ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ : | 09-12-2021 | 21-12-2021 |
| ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಲು ಪಾವತಿಸಲು ದಿನಾಂಕ : | 13-12-2021 | 23-12-2021 |
| ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ : | 13-12-2021 | 23-12-2021 |
| ಕಾಲೇಜಿನವರು ಅರ್ಜಿಗಳನ್ನು ಜಿಲ್ಲಾ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸುವ ದಿನಾಂಕ : | 15-12-2021 | 25-12-2021 |

: ವಿಶೇಷ ಸೂಚನೆ :

1. ಪ್ರೌಢಶಾಲಾ ಮುಖ್ಯ ಶಿಕ್ಷಕರು ದೃಢೀಕರಿಸಿ ನೀಡುವ ತಾತ್ಕಾಲಿಕ ಅಂಕಪಟ್ಟಿಯೊಂದಿಗೆ ಖಾಸಗಿ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಂಡ ಅಭ್ಯರ್ಥಿಗಳಿಂದ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು, ಇವರು ಮೂಲ ಅಂಕಪಟ್ಟಿಗಳನ್ನು ವಿತರಿಸಿದ ನಂತರ ಕಡ್ಡಾಯವಾಗಿ ಪಡೆಯುವುದು.
2. ಉಳಿದಂತೆ ಉಲ್ಲೇಖ : 01ರ ಪಪೂಶಿ ಇಲಾಖೆಯ ಸುತ್ತೋಲೆಯಲ್ಲಿನ ಎಲ್ಲಾ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸುವುದು.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ
ಬೆಂಗಳೂರು

Scanned with CamScanner